ಶ್ರೀ ವಾಟಾಳ್ ನಾಗರಾಜ್ : ವಿಧಾನಸಭಾಧ್ಯಕ್ಷರು ಎಂದು ತಪ್ಪಾಗಿ ಬಿದ್ದಿರಬಹುದು. ಆದರೆ ನಿಮ್ಮ ಹೆಸರು ಕೃಷ್ಣ ಎಂದು. ತಾವು ಎಲ್ಲಿ ಬೇಕಾದರೂ ಪ್ರತ್ಯಕ್ಷವಾಗಬಹುದೆಂದು ಕಾಣುತ್ತದೆ. ಒಬ್ಬರೇ ಅಧ್ಯಕ್ಷರು ನೂರಾರು ಕಡೆ ಹೋಗಬಹುದೆಂದು ಭಾವನೆ ಇರಬಹುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ವಿಧಾನಸಭಾ ಸದಸ್ಯರು ತಾಲ್ಲೂಕ್ ಲ್ಯಾಂಡ್ ಗ್ರಾಂಟ್ ಕಮಿಟಿಗೆ ಅಧ್ಯಕ್ಷರಾಗಿರಬೇಕೆಂದು ಇರಬೇಕು. ಅದು ಪ್ರಿಂಟಿಂಗ್ ಮಿಸ್ಟೇಕ್ ಆಗಿದೆ. ಅದನ್ನು ಆ ರೀತಿ ತಿದ್ದುಕೊಳ್ಳಬೇಕು.

ಶ್ರೀ ಡಿ.ಬಿ. ಚಂದ್ರೇಗೌಡ : ಯಾವ ರೀತಿ ಮಸೂದೆ ತಂದರೂ ಹೀಗಾಗಿರ ಬಹುದೆಂದು ಭಾವಿಸಬೇಕೆ? ಶಾಸನ ಸಭೆಯಲ್ಲಿ ಮಸೂದೆ ತರುತ್ತಿದ್ದೀರಿ. this show the callous attitude of the Government. Even the concerned Minister has not taken note of this. What are your Officers doing? You must take note. ...

Sri M. Mallikarjuna Kharge : I do agree. That will be rectified.

MR. SPEAKER : I with-hold this till it is rectified. ...

3. ಕನ್ನಡ ವಿಶ್ವವಿದ್ಯಾನಿಲಯ ವಿಧೇಯಕ 1991 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) ಮಾನ್ಯ ಅಧ್ಯಕ್ಷರೆ, 1991ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪ ಮೊಯ್ಲಿ (ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ 1991ನೇ ಸಾಲಿನ ಕನ್ನಡ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (Annexure 1 & 2)

4. 1991ನೇ ಸಾಲಿನ ಕರ್ನಾಟಕ ವ್ಯವಸಾಯೋತ್ಪನ್ನ ಮಾರುಕಟ್ಟೆ (ನಿಯಂತ್ರಣ) ಮತ್ತು ಕೆಲವು ಇತರೆ ಕಾನೂನುಗಳು (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ 1991ನೇ ಸಾಲಿನ ಕರ್ನಾಟಕ ವ್ಯವಸಾಯೋತ್ಪನ್ನ ಮಾರುಕಟ್ಟೆ (ನಿಯಂತ್ರಣ) ಮತ್ತು ಕೆಲವು ಇತರೆ ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"1991ನೇ ಸಾಲಿನ ಕರ್ನಾಟಕ ವ್ಯವಸಾಯೋತ್ಪನ್ನ ಮಾರುಕಟ್ಟೆ (ನಿಯಂತ್ರಣ) ಮತ್ತು ಕೆಲವು ಇತರೆ ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."